## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | (853)89 |
| ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 24.08.2026 |

| | **ಪ್ರಶ್ನೆ** | **ಉತ್ತರ** |
|---|---|---|
| (ಅ) | ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಾರ್ವಜನಿಕ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಮಂಜೂರಾಗಿರುವ, ಸೃಜನೆಯಾಗಿರುವ ಹಾಗೂ ಪ್ರಸ್ತುತ ಖಾಲಿಯಿರುವ ಒಟ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು: (ವಿಶ್ವವಿದ್ಯಾಲಯವಾರು ಸಂಪೂರ್ಣ ಮಾಹಿತಿ ನೀಡುವುದು) | ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿಯಲ್ಲಿ 32 ಸಾರ್ವಜನಿಕ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ. ವಿವರಗಳನ್ನು **ಅನುಬಂಧ-1 ರಲ್ಲಿ** ಒದಗಿಸಲಾಗಿದೆ.<br>ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಪ್ರಸ್ತುತ ಖಾಲಿ ಇರುವ ಬೋಧಕ ಹುದ್ದೆಗಳ ವಿವರಗಳನ್ನು ವಿಶ್ವವಿದ್ಯಾಲಯವಾರು **ಅನುಬಂಧ-2**ರಲ್ಲಿ ಮತ್ತು ಬೋಧಕೇತರ ಹುದ್ದೆಗಳ ವಿವರವನ್ನು **ಅನುಬಂಧ-3** ರಲ್ಲಿ ಒದಗಿಸಲಾಗಿದೆ. |
| (ಆ) | ಬೋಧಕ ಮತ್ತು ಬೋಧಕೇತರ ಹುದ್ದೆಗಳು ಬೃಹತ್ ಪ್ರಮಾಣದಲ್ಲಿ ಖಾಲಿ ಇರುವುದರಿಂದ ಮತ್ತು ವಿಶ್ವವಿದ್ಯಾಲಯಗಳಲ್ಲಿ ಶಿಕ್ಷಣದ ಗುಣಮಟ್ಟ ಮತ್ತು ಆಡಳಿತಾತ್ಮಕ ಕಾರ್ಯಗಳಿಗೆ ಹಿನ್ನಡೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಾರ್ವಜನಿಕ ವಿಶ್ವವಿದ್ಯಾಲಯದಲ್ಲಿ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನದಲ್ಲಿದ್ದು, ಬೋಧಕ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲು ಅನುವಾಗುವಂತೆ The Statutes Relating to Appointment and Promotion of Teachers and Other Academic Staff and Measures for the Maintenance of Standards in Higher Education as per The UGC Regulations 2018ನ್ನು ಘನತೆವೆತ್ತ ಕುಲಾಧಿಪತಿಗಳ ಅನುಮೋದನೆಯೊಂದಿಗೆ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಏಕರೂಪ ಮಾದರಿ ಪರಿನಿಯಮಗಳನ್ನು ರಚಿಸಲಾಗಿರುತ್ತದೆ. ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯಗಳು ರಚಿಸಿಕೊಂಡಿರುವ ಪರಿನಿಯಮಗಳನ್ವಯ ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಬೇಕಾಗಿರುತ್ತದೆ.<br>ಮುಂದುವರೆದು, 2026-27ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-121ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ.<br>**"ಸಾರ್ವಜನಿಕ ವಿಶ್ವವಿದ್ಯಾಲಯಗಳಲಿ 1000 ಬೋಧಕ ಹುದ್ದೆಗಳನ್ನು ತರ್ಕಬದ್ಧಗೊಳಿಸಿ ಹಂತಹಂತವಾಗಿ ಭರ್ತಿ ಮಾಡಲಾಗುವುದು".**<br>ಆಯವ್ಯಯ ಭಾಷಣ ಕಂಡಿಕೆಯನ್ವಯ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕಾರ್ಯಭಾರದ ಮಾಹಿತಿಯೊಂದಿಗೆ ಅವಶ್ಯಕವಾಗಿ ಭರ್ತಿ ಮಾಡಬೇಕಾಗಿರುವ ಖಾಲಿ ಹುದ್ದೆಗಳನ್ನು ಗುರುತಿಸಿ ಪ್ರಸ್ತಾವನೆ ಸಲ್ಲಿಸುವಂತೆ ರಾಜ್ಯದ 32 ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. |
| (ಇ) | ಬಂದಿದ್ದಲ್ಲಿ, ಖಾಲಿಯಿರುವ ಈ ಹುದ್ದೆಗಳನ್ನು ಹಂತ ಹಂತವಾಗಿ ಅಥವಾ ನೇರವಾಗಿ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ನೇಮಕಾತಿ ಅಧಿಸೂಚನೆ ಹೊರಡಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು; | |

| | | |
|---|---|---|
| | | ಅದರಂತೆ ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳಿಂದ ಬೋಧಕ, ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ವಿಭಾಗವಾರು / ವಿಷಯವಾರು ಕಾರ್ಯಭಾರದ ಬಗ್ಗೆ ಸರ್ಕಾರದಲ್ಲಿ ಪರಿಶೀಲಿಸಿ ನೇಮಕಾತಿ ಪ್ರಕ್ರಿಯೆಯನ್ನು ಚುರುಕುಗೊಳಿಸಲು ಕ್ರಮವಹಿಸಲಾಗುವುದು.<br><br>ಖಾಯಂ ಹುದ್ದೆಗಳ ಭರ್ತಿಯಾಗುವವರೆಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ ಅಧಿನಿಯಮ 2000ರ ಪ್ರಕರಣ 55 ಮತ್ತು 56ರಲ್ಲಿ ಪದತ್ತವಾದ ಅಧಿಕಾರದನ್ವಯ ವಿಶ್ವವಿದ್ಯಾಲಯದ ಕುಲಪತಿಗಳು ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ಮಂಜೂರಾದ ಹುದ್ದೆಗಳಿಗೆ ಎದುರಾಗಿ ಅತಿಥಿ ಉಪನ್ಯಾಸಕರನ್ನು ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡು ವಿಶ್ವವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳನ್ನು ನಿರ್ವಹಿಸಲಾಗುತ್ತಿರುತ್ತದೆ. |
| (ಈ) | **ಖಾಯಂ ಹುದ್ದೆಗಳ ಭರ್ತಿಯಾಗುವವರೆಗೆ ಶೈಕ್ಷಣಿಕ ಹಿತದೃಷ್ಟಿಯಿಂದ ನೇಮಕ ಮಾಡಿಕೊಳ್ಳಲಾಗಿರುವ ಅತಿಥಿ ಉಪನ್ಯಾಸಕರ ಹಾಗೂ ಹೊರಗುತ್ತಿಗೆ ಆಧಾರದ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಇವರಿಗೆ ಒದಗಿಸುತ್ತಿರುವ ಸೌಲಭ್ಯಗಳೇನು:** | ರಾಜ್ಯದಲ್ಲಿನ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳ ವಿವರಗಳನ್ನು **ಅನುಬಂಧ-4ರಲ್ಲಿ** ಒದಗಿಸಲಾಗಿದೆ.<br><br>ಯುಜಿಸಿಯು ದಿನಾಂಕ:28.01.219ರಂದು ಹೊರಡಿಸಿರುವ ಮಾರ್ಗಸೂಚಿಯಲ್ಲಿ ಪ್ರತಿ ಉಪನ್ಯಾಸಕ್ಕೆ ರೂ.1,500/-ರಂತೆ ತಿಂಗಳಿಗೆ ಗರಿಷ್ಠ ರೂ.50,000/- ಮೀರದಂತೆ ಗೌರವಧನವನ್ನು ನಿಗದಿಪಡಿಸಲಾಗಿದ್ದು, ಈ ಮಾರ್ಗಸೂಚಿಯನ್ವಯ ಸಾರ್ವಜನಿಕ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ತಮ್ಮ ಆಂತರಿಕ ಸಂಪನ್ಮೂಲದ ಲಭ್ಯತೆಗನುಗುಣವಾಗಿ ಪಾವತಿಸುತ್ತಿವೆ.<br><br>ಹೊರಗುತ್ತಿಗೆ ಆಧಾರದ ಮೇರೆಗೆ ನೇಮಕ ಮಾಡಿಕೊಂಡಿರುವ ಬೋಧಕೇತರ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ಇನ್ನಿತರ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>ಮುಂದುವರೆದು ಮಹಿಳಾ ಅತಿಥಿ ಉಪನ್ಯಾಸಕರಿಗೆ ಹಾಗೂ ಹೊರಗುತ್ತಿಗೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಮಹಿಳಾ ಸಿಬ್ಬಂದಿಗೆ 06 ತಿಂಗಳುಗಳ ಪ್ರಸೂತಿ ರಜೆಯನ್ನು ಕಡ್ಡಾಯವಾಗಿ ನೀಡಲಾಗುತ್ತಿದ್ದು, ಈ ಅವಧಿಯಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ಸೇವೆಯನ್ನು ಪಡೆಯುವ ಮೂಲಕ ಬದಲಿ ವ್ಯವಸ್ಥೆಯನ್ನು ಕಲ್ಪಿಸಿಕೊಳ್ಳಲಾಗಿದೆ. |
| (ಉ) | **ಹೊಸದಾಗಿ ಸ್ಥಾಪಿಸಲಾದ ಅಥವಾ ಘೋಷಿಸಲಾದ ವಿಶ್ವವಿದ್ಯಾಲಯಗಳಿಗೆ ಸೃಜನೆಯಾಗಿರುವ (Sanctioned) ಹೊಸ** | 2022-23ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ (103) ರಂತೆ ರಾಜ್ಯದಲ್ಲಿ ನೂತನವಾಗಿ ಈ ಕೆಳಕಂಡ 07 ಹೊಸ ವಿಶ್ವವಿದ್ಯಾಲಯಗಳನ್ನು ಯಾವುದೇ ಜಮೀನನ್ನಾಗಲಿ, |

| | | |
|---|---|---|
| | ಹುದ್ದೆಗಳ ಸಂಖ್ಯೆ ಎಷ್ಟು: ಈ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪಾರದರ್ಶಕವಾಗಿ ಪೂರ್ಣಗೊಳಿಸಲಾಗುವುದು? | ವಾಹನವನ್ನಾಗಲಿ ಖರೀದಿಸುವಂತಿಲ್ಲ ಹಾಗೂ ಹೊಸ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ, ಈಗಾಗಲೇ ಮಾತೃ ವಿಶ್ವವಿದ್ಯಾಲಯದಿಂದ ಮಂಜೂರಾಗಿರುವ ಹುದ್ದೆಗಳಲ್ಲಿ ಅವಶ್ಯಕ ಹುದ್ದೆಗಳನ್ನು ಬಳಸಿಕೊಳ್ಳುವುದು ಹಾಗೂ ಯಾವುದೇ ಹೊಸ ಹುದ್ದೆಗಳನ್ನು ಸೃಜಿಸುವಂತಿಲ್ಲ.ಈ ವಿಶ್ವವಿದ್ಯಾಲಯಗಳು ಸಂಪೂರ್ಣವಾಗಿ Digital Entrepreneurial (ಕೌಶಲ್ಯಾಧಾರಿತ) "Earn while you learn" ಮಾದರಿಯಂತೆ ಕಾರ್ಯನಿರ್ವಹಿಸುವುದು. ನೂತನ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ ರೂ.2.00 ಕೋಟಿಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸುವ ಷರತ್ತುಗಳೊಂದಿಗೆ ಸರ್ಕಾರದ **ಆದೇಶ ಸಂಖ್ಯೆ: ಇಡಿ 81 ಯುಎನ್ ಇ 2022 , ದಿನಾಂಕ: 18.04.2022 ರನ್ವಯ ಸ್ಥಾಪನೆ ಮಾಡಲಾಗಿರುತ್ತದೆ.**<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 81 ಯುಎನ್‌ಇ 2022 , ದಿನಾಂಕ: ದಿನಾಂಕ:18.08.2023ರಲ್ಲಿ ನೂತನವಾಗಿ ಸ್ಥಾಪಿತವಾಗಿರುವ 07 ವಿಶ್ವವಿದ್ಯಾಲಯಗಳಿಗೆ ಮಾತೃ ವಿಶ್ವವಿದ್ಯಾಲಯದಿಂದ ಈ ಕೆಳಕಂಡ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಸ್ಥಳಾಂತರಿಸಲಾಗಿರುತ್ತದೆ. ವಿವರಗಳು ಈ ಕೆಳಕಂಡಂತಿದೆ. |

| ಕ್ರ. ಸಂ | ಮಾತೃ ವಿಶ್ವವಿದ್ಯಾಲಯ | ನೂತನ ವಿಶ್ವವಿದ್ಯಾಲಯ | ಬೋಧಕ | ಬೋಧಕೇತರ |
|---|---|---|---|---|
| 1 | ಮೈಸೂರು ವಿಶ್ವವಿದ್ಯಾಲಯ | ಹಾಸನ ವಿಶ್ವವಿದ್ಯಾಲಯ | 27 | 245 |
| 2 | | ಚಾಮರಾಜನಗರ ವಿಶ್ವವಿವಿದ್ಯಾಲಯ | 36 | 90 |
| 3 | ಗುಲಬರ್ಗಾ ವಿಶ್ವವಿದ್ಯಾಲಯ | ಬೀದರ್ ವಿಶ್ವವಿದ್ಯಾಲಯ | 29 | 108 |
| 4 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ | ಕೊಪ್ಪಳ ವಿಶ್ವವಿದ್ಯಾಲಯ | 12 | 34 |
| 5 | ರಾಣಿಚೆನ್ನಮ್ಮ ವಿಶ್ವವಿದ್ಯಾಲಯ | ಬಾಗಲಕೋಟೆ ವಿಶ್ವವಿದ್ಯಾಲಯ | 12 | 51 |
| 6 | ಮಂಗಳೂರು ವಿಶ್ವವಿದ್ಯಾಲಯ | ಕೊಡಗು ವಿಶ್ವವಿದ್ಯಾಲಯ | 80 | 108 |
| 7 | ಧಾರವಾಡ ವಿಶ್ವವಿದ್ಯಾಲಯ | ಹಾವೇರಿ ವಿಶ್ವವಿದ್ಯಾಲಯ | 59 | 167 |

..4

ಹೊಸ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳು, ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನದಲ್ಲಿದ್ದು, ಇಂತಹ ಕೊರತೆಗಳನ್ನು ನಿವಾರಿಸಲು ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಸಂಶಾ 17 ಸಿಎಸ್‌ಸಿ 2024, ದಿನಾಂಕ:17.08.2024ರನ್ವಯ ಈ ಹಿಂದಿನ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿತ್ತು.

ಸದರಿ ಸಮಿತಿಯು ಆರ್ಥಿಕ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಶ್ವವಿದ್ಯಾಲಯಗಳ ಸಂಶೋಧನ, ಮೂಲಸೌಲಭ್ಯ, ಅನುದಾನ, ಪಿಂಚಣಿ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಅನುಕೂಲವಾಗುವಂತೆ ಅಗತ್ಯ ಹುದ್ದೆಗಳ ನೇಮಕಾತಿ ಹಾಗೂ ಇತ್ಯಾದಿ ಅವಶ್ಯಕ ವಿಷಯಗಳ ಕುರಿತು ಹಲವು ಸಭೆಗಳನ್ನು ನಡೆಸಿದ್ದು, ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿರುತ್ತದೆ. ಸದರಿ ಸಮಿತಿಯು ಸಂಪೂರ್ಣ / ಅಂತಿಮ ವರದಿಯನ್ನು ಸಲ್ಲಿಸಿರುವುದಿಲ್ಲ. ಈ ಮಧ್ಯೆ ಮಂತ್ರಿಮಂಡಲವು ಪುನರ್ ರಚನೆಗೊಂಡಿರುವುದರಿಂದ ಸಚಿವ ಸಂಪುಟ ಉಪಸಮಿತಿಯನ್ನು ಪುನರ್‌ರಚಿಸುವ ಕುರಿತು ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಇಡಿ 185 ಯುಎನ್‌ಇ 2026**

**(ಬಸವರಾಜ ರಾಯರಡ್ಡಿ)**
ಉನ್ನತ ಶಿಕ್ಷಣ ಸಚಿವರು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: (853)89**

**ಅನುಬಂಧ-1**

**ಉನ್ನತ ಶಿಕ್ಷಣ ಇಲಾಖೆಯಡಿ ಒಟ್ಟು 32 ಸಾರ್ವಜನಿಕ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ಕೆಳಗಿನಂತಿವೆ.**

| ಕ್ರ. ಸಂ | ಸಾರ್ವಜನಿಕ ವಿಶ್ವವಿದ್ಯಾಲಯಗಳ ಹೆಸರು |
|---|---|
| | ಮೈಸೂರು ವಿಶ್ವವಿದ್ಯಾಲಯ |
| 2. | ಮಂಡ್ಯ ವಿಶ್ವವಿದ್ಯಾಲಯ |
| 3. | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ |
| 4. | ಗುಲ್ಬರ್ಗಾ ವಿಶ್ವವಿದ್ಯಾಲಯ |
| 5. | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ |
| 6. | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ |
| 7. | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ |
| 8. | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ |
| 9. | ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ |
| 10. | ಕುವೆಂಪು ವಿಶ್ವವಿದ್ಯಾಲಯ |
| 11. | ದಾವಣಗೆರೆ ವಿಶ್ವವಿದ್ಯಾಲಯ |
| 12. | ಮಂಗಳೂರು ವಿಶ್ವವಿದ್ಯಾಲಯ |
| 13. | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ |
| 14. | ಕನ್ನಡ ವಿಶ್ವವಿದ್ಯಾಲಯ, ಹಂಪಿ |
| 15. | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. |
| 16. | ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ |
| 17. | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ |
| 18. | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು |
| 19. | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು |
| 20. | ತುಮಕೂರು ವಿಶ್ವವಿದ್ಯಾಲಯ, ತುಮಕೂರು |
| 21. | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. |
| 22. | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. |
| 23. | ನೃಪತುಂಗ ವಿಶ್ವವಿದ್ಯಾಲಯ |
| 24. | ಹಾಸನ ವಿಶ್ವವಿದ್ಯಾಲಯ |
| 25. | ಚಾಮರಾಜನಗರ ವಿಶ್ವವಿದ್ಯಾಲಯ |
| 26. | ಬೀದರ್ ವಿಶ್ವವಿದ್ಯಾಲಯ |
| 27. | ಕೊಪ್ಪಳ ವಿಶ್ವವಿದ್ಯಾಲಯ |
| 28. | ಕೊಡಗು ವಿಶ್ವವಿದ್ಯಾಲಯ |
| 29. | ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ |
| 30. | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ |
| 31. | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ |
| 32. | ಯುವಿಸಿಇ ವಿಶ್ವವಿದ್ಯಾಲಯ |

## ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: (853)89

## ಅನುಬಂಧ-2

### ಬೋಧಕ ಹುದ್ದೆಗಳು:

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಮಂಜೂರಾದ | ಭರ್ತಿಯಾದ | ಖಾಲಿಯಿರುವ |
|---|---|---|---|---|
| 01 | ಮೈಸೂರು ವಿಶ್ವವಿದ್ಯಾಲಯ | 571 | 166 | 405 |
| 02 | ಮಂಡ್ಯ ವಿಶ್ವವಿದ್ಯಾಲಯ | 47 | 00 | 47 |
| 03 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 133 | 66 | 67 |
| 04 | ಗುಲ್ಬರ್ಗಾ ವಿಶ್ವವಿದ್ಯಾಲಯ | 206 | 24 | 182 |
| 05 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ | 31 | 03 | 28 |
| 06 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ | 139 | 83 | 56 |
| 07 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 45 | 22 | 23 |
| 08 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 18 | 08 | 10 |
| 09 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 15 | 00 | 15 |
| 10 | ಕುವೆಂಪು ವಿಶ್ವವಿದ್ಯಾಲಯ | 238 | 125 | 113 |
| 11 | ದಾವಣಗೆರೆ ವಿಶ್ವವಿದ್ಯಾಲಯ | 80 | 80 | 00 |
| 12 | ಮಂಗಳೂರು ವಿಶ್ವವಿದ್ಯಾಲಯ | 273 | 113 | 160 |
| 13 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ | 272 | 00 | 272 |
| 14 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 73 | 35 | 38 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 121 | 74 | 47 |
| 16 | ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 103 | 56 | 47 |
| 17 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 576 | 183 | 393 |
| 18 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 365 | 113 | 252 |

| | | | | |
|---|---|---|---|---|
| 19 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 161 | 09 | 152 |
| 20 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 214 | 113 | 101 |
| 21 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. | 74 | 04 | 70 |
| 22 | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. | 06 | 00 | 06 |
| 23 | ನೃಪತುಂಗ ವಿಶ್ವವಿದ್ಯಾಲಯ | 100 | 00 | 100 |
| 24 | ಹಾಸನ ವಿಶ್ವವಿದ್ಯಾಲಯ | 27 | 00 | 27 |
| 25 | ಚಾಮರಾಜನಗರ ವಿಶ್ವವಿದ್ಯಾಲಯ | 36 | 00 | 36 |
| 26 | ಬೀದರ್ ವಿಶ್ವವಿದ್ಯಾಲಯ | 29 | 00 | 29 |
| 27 | ಕೊಪ್ಪಳ ವಿಶ್ವವಿದ್ಯಾಲಯ | 12 | 00 | 12 |
| 28 | ಕೊಡಗು ವಿಶ್ವವಿದ್ಯಾಲಯ | 80 | 00 | 80 |
| 29 | ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ | 12 | 00 | 12 |
| 30 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 59 | 00 | 59 |
| 31 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 228 | 135 | 93 |
| 32 | ಯುವಿಸಿಇ ವಿಶ್ವವಿದ್ಯಾಲಯ | 139 | 65 | 74 |
| | **ಒಟ್ಟು** | **4483** | **1477** | **3006** |

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: (853)89

ಅನುಬಂಧ-3

**ಬೋಧಕೇತರ ಹುದ್ದೆಗಳು:**

| ಕ್ರ. ಸಂ | ವಿಶ್ವವಿದ್ಯಾಲಯದ ಹೆಸರು | ಮಂಜೂರಾದ | ಭರ್ತಿ ಯಾದ | ಖಾಲಿಯಾದ |
|---|---|---|---|---|
| 01 | ಮೈಸೂರು ವಿಶ್ವವಿದ್ಯಾಲಯ | 799 | 354 | 445 |
| 02 | ಮಂಡ್ಯ ವಿಶ್ವವಿದ್ಯಾಲಯ | 253 | 00 | 253 |
| 03 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 575 | 255 | 320 |
| 04 | ಗುಲ್ಬರ್ಗಾ ವಿಶ್ವವಿದ್ಯಾಲಯ | 433 | 155 | 278 |
| 05 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ | 268 | 99 | 169 |
| 06 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ | 102 | 27 | 75 |
| 07 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 62 | 53 | 09 |
| 08 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 35 | 17 | 18 |
| 09 | ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 19 | 00 | 19 |
| 10 | ಕುವೆಂಪು ವಿಶ್ವವಿದ್ಯಾಲಯ | 591 | 197 | 394 |
| 11 | ದಾವಣಗೆರೆ ವಿಶ್ವವಿದ್ಯಾಲಯ | 178 | 36 | 142 |
| 12 | ಮಂಗಳೂರು ವಿಶ್ವವಿದ್ಯಾಲಯ | 439 | 149 | 290 |
| 13 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ | 168 | 00 | 168 |
| 14 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 234 | 121 | 113 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 236 | 123 | 113 |
| 16 | ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 173 | 09 | 164 |
| 17 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 1201 | 341 | 860 |
| 18 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 1176 | 338 | 838 |
| 19 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 123 | 06 | 117 |
| 20 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 214 | 46 | 168 |
| 21 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. | 96 | 05 | 91 |
| 22 | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. | 49 | 00 | 49 |
| 23 | ನೃಪತುಂಗ ವಿಶ್ವವಿದ್ಯಾಲಯ | 43 | 00 | 43 |

| | | | | |
|---|---|---|---|---|
| 24 | ಹಾಸನ ವಿಶ್ವವಿದ್ಯಾಲಯ | 245 | 00 | 245 |
| 25 | ಚಾಮರಾಜನಗರ ವಿಶ್ವವಿದ್ಯಾಲಯ | 90 | 00 | 90 |
| 26 | ಬೀದರ್ ವಿಶ್ವವಿದ್ಯಾಲಯ | 108 | 00 | 108 |
| 27 | ಕೊಪ್ಪಳ ವಿಶ್ವವಿದ್ಯಾಲಯ | 34 | 00 | 34 |
| 28 | ಕೊಡಗು ವಿಶ್ವವಿದ್ಯಾಲಯ | 108 | 00 | 108 |
| 29 | ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ | 51 | 00 | 51 |
| 30 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 167 | 00 | 167 |
| 31 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 425 | 246 | 179 |
| 32 | ಯುವಿಸಿಇ ವಿಶ್ವವಿದ್ಯಾಲಯ | 294 | 27 | 267 |
| | **ಒಟ್ಟು** | **8989** | **2604** | **6385** |

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: (853)89**

**ಅನುಬಂಧ-4**

| ಕ್ರ. ಸಂ | ವಿಶ್ವವಿದ್ಯಾಲಯದ ಹೆಸರು | ಅತಿಥಿ ಉಪನ್ಯಾಸಕರ ಸಂಖ್ಯೆ | ಹೊರಗುತ್ತಿಗೆ ಮೇಲೆ ನೇಮಕ ಮಾಡಿಕೊಂಡಿರುವ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ |
|---|---|---|---|
| 1. | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 250 | 467 |
| 2. | ಬೆಂಗಳೂರು ನಗರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು. | 217 | 143 |
| 3. | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, , ಟಮಕ, ಕೋಲಾರ | 61 | 17 |
| 4. | ಮೈಸೂರು ವಿಶ್ವವಿದ್ಯಾಲಯ, ಮೈಸೂರು | 534 | 113 |
| 5. | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 361 | 564 |
| 6. | ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ | 316 | 384 |
| 7. | ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | 162 | 00 |
| 8. | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | 101 | 153 |
| 9. | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 161 | 276 |
| 10. | ಕನ್ನಡ ವಿಶ್ವವಿದ್ಯಾಲಯ, ಹಂಪಿ | 12 | 145 |
| 11. | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | 82 | 293 |
| 12. | ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 46 | 00 |
| 13. | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾನಿಲಯ, ಬಳ್ಳಾರಿ, | 65 | 119 |
| 14. | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು | 02 | 130 |
| 15. | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 55 | 98 |
| 16. | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು | 10 | 18 |
| 17. | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಹಾವೇರಿ | 21 | 21 |
| 18. | ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು. | 16 | 26 |
| 19. | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | 119 | 55 |
| 20. | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು | 81 | 113 |
| 21. | ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ, ಬೆಂಗಳೂರು | 00 | 26 |
| 22. | ಹಾಸನ ವಿಶ್ವವಿದ್ಯಾಲಯ, ಹಾಸನ | 81 | 26 |
| 23. | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 22 | 24 |
| 24. | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | 59 | 17 |

| | | | |
|---|---|---|---|
| 25 | ಬೀದರ್ ವಿಶ್ವವಿದ್ಯಾಲಯ, ಬೀದರ್ | **64** | **97** |
| 26. | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ | **59** | **47** |
| 27. | ಕೊಡಗು ವಿಶ್ವವಿದ್ಯಾಲಯ, , ಕೊಡಗು | **50** | **43** |
| 28. | ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ | **21** | **19** |
| 29. | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ | **174** | **343** |
| 30. | ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು, ವಿಶ್ವವಿದ್ಯಾಲಯ, ಬೆಂಗಳೂರು. | **80** | **127** |
| 31 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | **98** | **93** |
| 32 | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು | **54** | **34** |
| | **ಒಟ್ಟು** | **3434** | **4031** |